ಶಾಖೆ / ವಿಷಯ : DEPARTMENT / SUBJECT: [illegible]

ದಿನಾಂಕ : DATE : 30/11/20

ಪತ್ರಿಕೆಯ ಹೆಸರು : NAME OF THE NEWS PAPER:

ವಿಧಾನಸಭೆಯಲ್ಲಿ ಎರಡು ದಿನದ ಚರ್ಚೆ । ಕಲಾಪಕ್ಕೆ ಬರುವವರ ಕೋವಿಡ್ ಟೆಸ್ಟ್ ಬಗ್ಗೆ ಶೀಘ್ರವೇ ತೀರ್ಮಾನ । ಚಳಿಗಾಲದ ಅಧಿವೇಶನದಲ್ಲಿ ಮಂಡನೆಯಾಗಲಿದೆ 10 ವಿಧೇಯಕ

ಒಂದು ರಾಷ್ಟ್ರ- ಒಂದು ಚುನಾವಣೆ; ಕಲಾಪದ ಚರ್ಚಾ ವಿಷಯ



ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಪ್ರಧಾನಿ ನರೇಂದ್ರ ಮೋದಿ ಅವರಿಂದ ಹಿಡಿದು ಅನೇಕರು ಆಗಾಗ್ಗೆ ಪ್ರಸ್ತಾಪಿಸುತ್ತಿರುವ 'ಒಂದು ರಾಷ್ಟ್ರ-ಒಂದು ಚುನಾವಣೆ' ಪರಿಕಲ್ಪನೆ ಬಗ್ಗೆ ಈ ಬಾರಿಯ ಚಳಿಗಾಲದ ಅಧಿವೇಶನದಲ್ಲಿ ಚರ್ಚೆಗೆ ಅವಕಾಶ ನೀಡಲಾಗಿದೆ.

ಡಿ.7ರಿಂದ ನಡೆಯಲಿರುವ ಅಧಿವೇಶನದ ಕೊನೆಯ ಎರಡು ದಿನವನ್ನು ಇದಕ್ಕೆ ಮೀಸಲಿಡಲು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಚಿಂತನೆ ನಡೆಸಿದ್ದು, ಈ ಬಗ್ಗೆ ಪ್ರತಿಪಕ್ಷ ನಾಯಕರೊಂದಿಗೆ ಚರ್ಚಿಸಿ ಚರ್ಚೆಗೆ ಅವಕಾಶ ನೀಡುವುದಾಗಿ ಹೇಳಿದ್ದಾರೆ.

ಒಂದು ರಾಷ್ಟ್ರ- ಒಂದು ಚುನಾವಣೆ ವಿಷಯ ಕಳೆದ ಕೆಲ ವರ್ಷಗಳಿಂದ ಕೇಳಿಬರುತ್ತಿದೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಪರ ವಿರೋಧ ಚರ್ಚೆಯೂ ನಡೆಯುತ್ತಲೇ ಇರುತ್ತದೆ. ಇದಕ್ಕೆ ಪೂರಕ ಎನ್ನುವ ರೀತಿಯಲ್ಲಿ ಕೆಲ ದಿನಗಳ ಹಿಂದೆ ಪ್ರಧಾನಿ ನರೇಂದ್ರ ಮೋದಿ ಅವರು ಈ ಕಲ್ಪನೆಯಿಂದ ದೇಶಕ್ಕೆ ಲಾಭವಿದೆ ಎನ್ನುವ ಮಾತನ್ನು ಹೇಳಿದ್ದರು. ಈ ಹೇಳಿಕೆ ಬೆನ್ನಲ್ಲೇ ಸಾಕಷ್ಟು ಪರ ವಿರೋಧ ಚರ್ಚೆಗಳು ಆರಂಭಗೊಂಡಿವೆ. ಆದ್ದರಿಂದ ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಈ ವಿಷಯಕ್ಕೆ ಸಂಬಂಧಿಸಿದಂತೆ ಡಿ.14-15ರಂದು ವಿಶೇಷ ಚರ್ಚೆಗೆ ಅವಕಾಶ ನೀಡಲು ನಿರ್ಧರಿಸಿದ್ದಾರೆ.

ಈ ಬಗ್ಗೆ ಮಾತನಾಡಿದ ಅವರು, [illegible] ಗಳ ಸಭೆಯಲ್ಲಿ ಈ ವಿಷಯ ಪ್ರಸ್ತಾಪವಾಯಿತು. ಸಮ್ಮೇಳನದಲ್ಲಿ ಒಬ್ಬೊಬ್ಬರು ಒಂದೊಂದು ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಕರ್ನಾಟಕದಲ್ಲಿಯೂ ಗಂಭೀರ ಚರ್ಚೆಯ ಅಗತ್ಯವಿದೆ. ಆದ್ದರಿಂದ ಚಳಿಗಾಲದ ಅಧಿವೇಶನದಲ್ಲಿ ಎರಡು ದಿನ ವಿಶೇಷ ಚರ್ಚೆಗೆ ಅವಕಾಶ ನೀಡಲಾಗುವುದು ಎಂದರು. [illegible]

ಕರೋನಾ ಟೆಸ್ಟ್: ತಜ್ಞರ ವರದಿ ನಿರೀಕ್ಷೆ

ಕಳೆದ ಅಧಿವೇಶನದ ವೇಳೆ ಕರೋನಾ ಸೋಂಕು ಪತ್ತೆಯಾಗಿದ್ದರಿಂದ ಸದನದಲ್ಲಿ ಭಾಗವಹಿಸುವ ಪ್ರತಿಯೊಬ್ಬರು ಕಡ್ಡಾಯವಾಗಿ ಕೋವಿಡ್ ಪರೀಕ್ಷೆ ಮಾಡಿಸಬೇಕು ಎನ್ನುವ ಸುತ್ತೋಲೆಯನ್ನು ಹೊರಡಿಸಲಾಗಿತ್ತು. ಈ ಬಾರಿ ಕೋವಿಡ್ ಪರೀಕ್ಷೆ ಮಾಡಿಸಬೇಕೋ ಬೇಡವೋ ಎನ್ನುವ ಬಗ್ಗೆ ಆರೋಗ್ಯ ಇಲಾಖೆಯ ತಜ್ಞರೊಂದಿಗೆ ಚರ್ಚಿಸಿ ನಿರ್ಧರಿಸಲಾಗುವುದು. ಅದರೊಂದಿಗೆ ಈ ಬಾರಿ ಯಾವ ರೀತಿಯ ಮಾರ್ಗಸೂಚಿಯನ್ನು [illegible] ಎನ್ನುವ ಬಗ್ಗೆಯೂ ಶೀಘ್ರದಲ್ಲಿಯೇ ನಿರ್ಧರಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಪ್ರಶ್ನೋತ್ತರ ಅವಧಿ

ಈ ಬಾರಿಯ ಚಳಿಗಾಲದ ಅಧಿವೇಶನದಲ್ಲಿ ಒಟ್ಟು 10 ವಿಧೇಯಕಗಳನ್ನು ಮಂಡಿಸಲಾಗುವುದು. ಪ್ರತಿಯೊಂದು ವಿಧೇಯಕದ ಬಗ್ಗೆ ಶಾಸಕರು ಚರ್ಚಿಸಲು ಹಾಗೂ ಸರ್ಕಾರದಿಂದ ಉತ್ತರ [illegible] ಅವಕಾಶವಾಗುವ ರೀತಿಯಲ್ಲಿ [illegible]. ಇದರೊಂದಿಗೆ ಪ್ರಶ್ನೋತ್ತರ ಅವಧಿಯನ್ನು ನಡೆಸಲು ತೀರ್ಮಾನಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

[illegible] ಕರ್ನಾಟಕ ವಿಧಾನಸಭೆ ಇದೆ. ಇದೀಗ ದೇಶದಲ್ಲಿಯೇ ಮೊದಲ ಬಾರಿಗೆ ಒಂದು ರಾಷ್ಟ್ರ-ಒಂದು ಚುನಾವಣೆ ಬಗ್ಗೆ ಚರ್ಚೆ ಮಾಡಲಿರುವ ವಿಧಾನಸಭೆ ಎನ್ನುವ ಕೀರ್ತಿಗೆ ಕರ್ನಾಟಕ ಭಾಜನವಾಗಲಿದೆ. [illegible]